# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತೇಳನೆಯ ಅಧಿವೇಶನ

## ಕಾರ್ಯಕಲಾಪಗಳ ಪಟ್ಟಿ

**ಬುಧವಾರ, ದಿನಾಂಕ: 21ನೇ ಸೆಪ್ಟೆಂಬರ್, 2022**

**(ಸಮಯ: ಬೆಳಗ್ಗೆ: 11.00 ಗಂಟೆಗೆ)**

* * *

## 01. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

ಆ) **ತಡೆಹಿಡಿಯಲಾದ ಪ್ರಶ್ನೆಗಳು:**

| | |
|---|---|
| 3ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಗೋವಿಂದರಾಜು** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 39 (221) | ಮಾನ್ಯ ಲೋಕೋಪಯೋಗಿ ಸಚಿವರು |
| 4ನೇ ಪಟ್ಟಿಯಿಂದ ತಡೆಹಿಡಿಯಲಾದ **ಶ್ರೀ ಹೆಚ್.ಎಸ್.ಗೋಪಿನಾಥ್** ಅವರ ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ: 59 (459) | ಮಾನ್ಯ ಕಂದಾಯ ಸಚಿವರು |

ಇ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಎಂಟನೆಯ ಪಟ್ಟಿ

## 02. ವಿತ್ತೀಯ ಕಾರ್ಯಕಲಾಪ

**ಶ್ರೀ ಬಸವರಾಜ ಬೊಮ್ಮಾಯಿ (ಮಾನ್ಯ ಮುಖ್ಯಮಂತ್ರಿಗಳು) ಅವರು:** 2022–23ನೇ ಸಾಲಿನ ಪೂರಕ ಅಂದಾಜುಗಳನ್ನು (ಒಂದನೇ ಕಂತು) ಮಂಡಿಸುವುದು.

## 03. ವರದಿಯನ್ನೊಪ್ಪಿಸುವುದು

**ಶ್ರೀ ಮಂಜುನಾಥ್ ಭಂಡಾರಿ (ಸದಸ್ಯರು, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)** ಅವರು ಕರ್ನಾಟಕ ವಿಧಾನ ಮಂಡಲದ **ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ** ಸಮಿತಿಯ 2021–22ನೇ ಸಾಲಿನ 5ನೇ ವರದಿಯನ್ನೊಪ್ಪಿಸುವುದು.

## 04. ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು

**ವಿಧಾನ ಸಭೆಯಿಂದ ಅಂಗೀಕೃತವಾದ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಕಾರ್ಯದರ್ಶಿಯವರು ಸಭೆಯ ಮುಂದಿಡುವುದು.**

01. ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ, 2022
02. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 2022
03. ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕ, 2022
04. ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕ. 2022

## 05. ಶಾಸನ ರಚನೆ

**ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

01 ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ, 2022
**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ “ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ (ತಿದ್ದುಪಡಿ) ವಿಧೇಯಕ”ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

02. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ, 2022
**ಶ್ರೀ ಬಸವರಾಜ ಬೊಮ್ಮಾಯಿ ( ಮಾನ್ಯ ಮುಖ್ಯಮಂತ್ರಿಗಳು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ “ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ (ಎರಡನೇ ತಿದ್ದುಪಡಿ) ವಿಧೇಯಕ”ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

03. ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕ, 2022
**ಶ್ರೀ ಎನ್. ನಾಗರಾಜು (ಎಂ.ಟಿ.ಬಿ.) (ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು, ಸಾರ್ವಜನಿಕ ವಲಯದ ಕೈಗಾರಿಕೆಗಳ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ “ಕರ್ನಾಟಕ ಮುನಿಸಿಪಾಲಿಟಿಗಳ (ತಿದ್ದುಪಡಿ) ವಿಧೇಯಕ” ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

04. ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕ. 2022
**ಡಾ. ನಾರಾಯಣಗೌಡ ( ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು) ಅವರು:–**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2022ನೇ ಸಾಲಿನ "ಕರ್ನಾಟಕ ರೇಷ್ಮೆಹುಳುಬಿತ್ತನೆ, ರೇಷ್ಮೆಗೂಡು ಮತ್ತು ರೇಷ್ಮೆನೂಲು (ಉತ್ಪಾದನೆ, ಸರಬರಾಜು, ವಿತರಣೆ ಮತ್ತು ಮಾರಾಟ ವಿನಿಯಮನ) (ತಿದ್ದುಪಡಿ) ವಿಧೇಯಕ" ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

## 06. ಗಮನ ಸೆಳೆಯುವ ಸೂಚನೆಗಳು

01. **ಶ್ರೀ ಮಧು ಜಿ. ಮಾದೇಗೌಡ** ಅವರು ಸಹಾಯಕ ಪ್ರಾಧ್ಯಾಪಕರುಗಳಿಗೆ ಪತಿ–ಪತ್ನಿ ಪ್ರಕರಣದಡಿ ಸ್ಥಳ ಮಾರ್ಪಾಡು ಮಾಡಿಕೊಳ್ಳಲು ಅವಕಾಶ ಕಲ್ಪಿಸುವ ಕುರಿತು ಮಾನ್ಯ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರ ಗಮನ ಸೆಳೆಯುವುದು.

02. **ಶ್ರೀ ಬಿ.ಎಂ. ಫಾರೂಖ್** ಅವರು ವ್ಯಾಪಾರ ಹಾಗೂ ವಾಣಿಜ್ಯ ಉದ್ದೇಶಕ್ಕಾಗಿ ವಿದೇಶಿ ಕಂಪನಿಗಳೊಂದಿಗೆ ಬಂಡವಾಳ ಹೂಡಲು ಹಾಗೂ ವ್ಯಾಪಾರ ಮಾಡಲು ವಿಧಾನ ಮಂಡಲದ ಶಾಸಕರುಗಳಿಗೆ ಇರುವ ಅಡೆತಡೆಗಳ ಕುರಿತು ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

03. **ಶ್ರೀ ಗಣಪತಿ ದುಮ್ಮಾ ಉಳ್ವೇಕರ್** ಅವರು ಮತ್ಸ್ಯ ಸಿರಿ ಯೋಜನೆಯಲ್ಲಿ ಟ್ರಾಲರ್ ಅಥವಾ ಪರ್ಶಿಯನ್ ದೋಣಿಗಳನ್ನು ನಿರ್ಮಿಸಲು ಅವಕಾಶ ನೀಡುವ ಕುರಿತು ಮಾನ್ಯ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರ ಗಮನ ಸೆಳೆಯುವುದು.

04. **ಶ್ರೀ ಕೇಶವ ಪ್ರಸಾದ್ ಎಸ್.** ಅವರು ಬೆಂಗಳೂರಿನ ಹೆಬ್ಬಾಳ ಫ್ಲೈ ಓವರ್ ಬಳಿ ದಿನನಿತ್ಯ ವಾಹನ ದಟ್ಟಣೆ ಹೆಚ್ಚಾಗಿರುವುದರಿಂದ ಸಾರ್ವಜನಿಕರಿಗೆ ಅನಾನುಕೂಲವಾಗುತ್ತಿದ್ದು ಸರ್ಕಾರವು ಪರ್ಯಾಯ ಪರಿಹಾರವನ್ನು ಕಲ್ಪಿಸುವ ಕುರಿತು ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

05. **ಶ್ರೀ ಡಿ.ಎಸ್. ಅರುಣ್** ಅವರು ಜಾಗತಿಕ ಹೂಡಿಕೆದಾರರ ಸಮಾವೇಶದ ನಂತರ ಉದ್ಯೋಗ ಸೃಷ್ಠಿಯಾಗಿರುವ ಕುರಿತು ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರ ಗಮನ ಸೆಳೆಯುವುದು.

## 07. ನಿಯಮ 330ರ ಮೇರೆಗೆ

01. **ಶ್ರೀಯುತರುಗಳಾದ ಕೆ.ಎ. ತಿಪ್ಪೇಸ್ವಾಮಿ, ಎಸ್.ಎಲ್.ಭೋಜೇಗೌಡ, ಗೋವಿಂದರಾಜು ಮತ್ತು ಸಿ.ಎನ್. ಮಂಜೇಗೌಡ** ಅವರುಗಳು ರಾಜ್ಯದಲ್ಲಿ ಇತ್ತೀಚಿಗೆ ನಡೆದಿರುವ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ನೇಮಕಾತಿ ಪ್ರಕ್ರಿಯೆಯಲ್ಲಿನ ಅವ್ಯವಹಾರದ ಕುರಿತು ಪ್ರಸ್ತಾಪಿಸುವುದು.

02. **ಶ್ರೀಯುತರುಗಳಾದ ಮಾನ್ಯ ವಿರೋಧ ಪಕ್ಷದ ನಾಯಕರಾದ ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರಾದ ಪ್ರಕಾಶ್ ಕೆ. ರಾಥೋಡ್, ಡಾ, ಕೆ. ಗೋವಿಂದರಾಜು, ಸಲೀಂ ಅಹಮದ್ ಮತ್ತು ಕೆ. ಅಬ್ದುಲ್ ಜಬ್ಬರ್ ಹಾಗೂ ಇತರರುಗಳು** ರಾಜ್ಯದಲ್ಲಿ ನಿರುದ್ಯೋಗಿ ಯುವಕರ ಸಂಖ್ಯೆ ಹೆಚ್ಚಾಗಿದ್ದು, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಹುದ್ದೆಗಳು ಭರ್ತಿಯಾಗದೆ ಖಾಲಿ ಇರುವ ಕುರಿತು ಪ್ರಸ್ತಾಪಿಸುವುದು.

03. **ಶ್ರೀ ಸವದಿ ಲಕ್ಷ್ಮಣ** ಅವರು ಹಾವನೂರು ವರದಿಯನ್ವಯ ಮಾಳಿ-ಮಾಲಗರ ಸಮುದಾಯದವರಿಗೆ ಪ್ರವರ್ಗ 2ಎ ಜಾತಿ/ ಸಿಂಧುತ್ವ ಪ್ರಮಾಣ ಪತ್ರ ವಿತರಿಸುವ ಕುರಿತು ಪ್ರಸ್ತಾಪಿಸುವುದು.

04. **ಶ್ರೀ ಅಡಗೂರು ಹೆಚ್. ವಿಶ್ವನಾಥ್ ಮತ್ತು ಶ್ರೀ ಮರಿತಿಬ್ಬೇಗೌಡ** ಅವರುಗಳು ಇತ್ತೀಚಿಗೆ ರಾಜ್ಯದ ಜಿಲ್ಲೆಯೊಂದರಲ್ಲಿ ಧರ್ಮಪೀಠದ ಧರ್ಮಾಧಿಕಾರಿಯೊಬ್ಬರು ಮಠದಲ್ಲಿ ವ್ಯಾಸಂಗ ಮಾಡುತ್ತಿದ್ದ ಅಪ್ರಾಪ್ತ ವಯಸ್ಸಿನ ಬಾಲಕಿಯರ ಮೇಲೆ ಲೈಂಗಿಕ ದೌರ್ಜನ್ಯವೆಸಗಿ, ಪೋಸ್ಕೋ ಕಾಯ್ದೆಯಡಿಯಲ್ಲಿ ಪ್ರಕರಣ ದಾಖಲಾಗಿರುವ ಹಿನ್ನಲೆಯಲ್ಲಿ ಸದರಿ ಕಾಯ್ದೆಯ ಪರಿಣಾಮಗಳ ಬಗ್ಗೆ ಪ್ರಸ್ತಾಪಿಸುವುದು.

## 08. ನಿಯಮ 68ರ ಮೇರೆಗೆ ಸಾರ್ವಜನಿಕ ಮಹತ್ವದ ವಿಷಯದ ಮೇಲಿನ ಮುಂದುವರೆದ ಚರ್ಚೆ

**ಶ್ರೀಯುತರುಗಳಾದ;-**

| | |
|---|---|
| ಬಿ.ಕೆ.ಹರಿಪ್ರಸಾದ್, ಮಾನ್ಯ ವಿರೋಧ ಪಕ್ಷದ ನಾಯಕರು, ಪ್ರಕಾಶ್ ಕೆ. ರಾಥೋಡ್, ಮಾನ್ಯ ವಿರೋಧ ಪಕ್ಷದ ಮುಖ್ಯ ಸಚೇತಕರು, ಸಲೀಂ ಅಹಮದ್, ಕೆ.ಎ.ತಿಪ್ಪೇಸ್ವಾಮಿ, ಶರವಣ ಟಿ.ಎ. ಮತ್ತು ಬಿ.ಎಂ. ಫಾರೂಖ್ ಹಾಗೂ ಇತರರುಗಳು | ರಾಜ್ಯದಲ್ಲಿ ಇತ್ತೀಚೆಗೆ ಸುರಿಯುತ್ತಿರುವ ಮಳೆಯಿಂದಾಗಿ ಬೆಂಗಳೂರು ನಗರ ಸೇರಿದಂತೆ ರಾಜ್ಯದ ಬಹುತೇಕ ಜಿಲ್ಲೆಗಳು ಪ್ರವಾಹ ಭೀತಿಯನ್ನು ಎದುರಿಸುತ್ತಿದ್ದು, ರಾಜ್ಯದ ಹೆದ್ದಾರಿ ಮತ್ತು ರಸ್ತೆಗಳು ಕೊಚ್ಚಿಹೋಗಿದ್ದು, ಕೆರೆ ಕೋಡಿಗಳು ಒಡೆದು ಅಪಾರ ಹಾನಿಯುಂಟಾಗಿ ಜನರು ಸಂಕಷ್ಟಕ್ಕೆ ಒಳಗಾಗಿರುವ ಕುರಿತು. |

ನಾಲ್ಕನೇ ದಿನ

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**